ಕಾಮಗಾರಿಯನ್ನು ಪ್ರಾರಂಭಿಸುವುದು

539 (366) ಶ್ರೀ ಪ್ರತಾಪಗೌಡ ಪಾಟೀಲ್ (ಮಸ್ಕಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧನೂರು ಪಟ್ಟಣಕ್ಕೆ ಬೈಪಾಸ್ ರಸ್ತೆ ಕೇಸಿಫ್-1 ರಲ್ಲಿ ಸೇರಿ ವರ್ಲ್ಡ್‌ಬ್ಯಾಂಕ್‌ನಿಂದ ಅನುಮತಿ ಪಡೆದು ಹಾಗೂ ಸರ್ವೆ ಕಾರ್ಯ ಕೂಡ ಪೂರ್ಣಗೊಂಡು ಕೊನೆಯ ಹಂತದಲ್ಲಿ ಕಾಮಗಾರಿಯನ್ನು ಕೈಬಿಡಲು ಕಾರಣವೇನು;

ಆ) ಈ ಯೋಜನೆಯನ್ನು ಮುಂದಿನ ಆಯವ್ಯಯದಲ್ಲಿ ತೆಗೆದುಕೊಳ್ಳಲು ಸರ್ಕಾರದ ಮುಂದೆ ಪ್ರಸ್ತಾವನೆ ಇರುವುದೇ?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ-1 ರಲ್ಲಿ ಪೂರ್ವಭಾವಿ ಅಧ್ಯಯನದ ಮೇರೆಗೆ ಸಿಂಧನೂರು ಪಟ್ಟಣಕ್ಕೆ ಬೈಪಾಸ್ ರಸ್ತೆ ನಿರ್ಮಿಸುವ ಬಗ್ಗೆ ಪ್ರಸ್ತಾವನೆಯನ್ನು ಮಾಡಲಾಗಿತ್ತು. ಆದರೆ ಈ ಬಗ್ಗೆ ವಿವರವಾದ ಯೋಜನಾ ವರದಿಯನ್ನು ತಯಾರಿಸಿರುವುದಿಲ್ಲ. ಈ ಸಮಯದಲ್ಲಿ ಸಿಂಧನೂರಿನಿಂದ ಬೂದಗುಂಪ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಗುತ್ತಿಗೆದಾರರಿಗೆ ವಹಿಸಲಾಗಿತ್ತು. ಹಾಗೂ ಕಾಮಗಾರಿಯು ಪ್ರಗತಿಯಲ್ಲಿತ್ತು. ಈ ಕಾಮಗಾರಿಯಲ್ಲಿ ಸಿಂದನೂರಿನಲ್ಲಿ ಹಾಲಿ ರಸ್ತೆಯ ಅಭಿವೃದ್ಧಿಯನ್ನು ಸೇರಿಸಲಾಗಿತ್ತು. ಈ ಸಮಯದಲ್ಲಿ ಸಿಂದನೂರು ಪಟ್ಟಣದಲ್ಲಿನ 1.2 ಕಿಮೀ. ರಸ್ತೆಯನ್ನು ಚತುರ್ಥ ಪಥ ರಸ್ತೆಯನ್ನಾಗಿ ವಿಸ್ತರಿಸಿ ಅಭಿವೃದ್ಧಿ ಪಡಿಸಲಾಗಿದೆ.

ಆ) ಈ ಯೋಜನೆಯನ್ನು ಮುಂದಿನ ಆಯವ್ಯಯದಲ್ಲಿ ತೆಗೆದುಕೊಳ್ಳಲು ಸರ್ಕಾರದ ಮುಂದೆ ಪ್ರಸ್ತಾವನೆ ಇರುವುದಿಲ್ಲ.

ಬಿ.ಪಿ.ಎಲ್. ಕಾರ್ಡ್ ವಿತರಣೆ

540 (1008) ಶ್ರೀ ಪ್ರಿಯಕೃಷ್ಣ (ಗೋವಿಂದ ರಾಜನಗರ) : ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೋವಿಂದರಾಜನಗರ ಮತಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ಕಡು ಬಡವರಿಗೆ ಬಿಪಿಎಲ್ ಕಾರ್ಡ್ ವಿತರಿಸಲಾಗಿದೆ;